# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೧<br>Part – I | ಬೆಂಗಳೂರು, ಗುರುವಾರ ೨೦, ನವೆಂಬರ್, ೨೦೨೫ (ಕಾರ್ತಿಕಾ , ೨೯, ಶಕವರ್ಷ, ೧೯೪೭)<br>BENGALURU, THURSDAY 20, NOVEMBER, 2025 ( KARTHIKA , 29, SHAKAVARSHA, 1947) | ನಂ. ೭೪೮<br>No. 748 |
|---|---|---|


## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದಲ್ಲಿ ವಿವಿಧ ಕಾರ್ಮಿಕ ಕಾಯ್ದೆಗಳಡಿ ನೋಂದಣಿಯಾಗಿರುವ ಉದ್ದಿಮೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ನೌಕರರಿಗೆ ಅವರ ಋತುಚಕ್ರದ ಸಮಯದಲ್ಲಿ ಮಾಸಿಕ ಒಂದು ದಿನದ ವೇತನ ಸಹಿತ ರಜೆ ಸೌಲಭ್ಯವನ್ನು ಒದಗಿಸುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಅಧಿಸೂಚನೆ ಸಂಖ್ಯೆ. ಕಾಇ 466 ಎಲ್ಇಟಿ 2023, ದಿನಾಂಕ:12/1/2024.
2. ಆಯುಕ್ತರು, ಕಾರ್ಮಿಕ ಇಲಾಖೆ ಇವರ ಪತ್ರ ಸಂಖ್ಯೆ: ಪಿ&ಎಸ್/ಇತರೆ-02/ಸಿಆರ್-39/2022-23, ದಿನಾಂಕ:21/02/2025.
3. ಸಚಿವ ಸಂಪುಟದ ಟಿಪ್ಪಣಿ ಸಂಖ್ಯೆ:834/2025, ದಿನಾಂಕ: 9/10/2025.

*****

ಮೇಲೆ ಕ್ರ.ಸಂ. (1) ರಲ್ಲಿ ಓದಲಾದ ಅಧಿಸೂಚನೆಯನ್ವಯ ರಾಜ್ಯದಲ್ಲಿ ಕಾರ್ಖಾನೆಗಳ ಕಾಯ್ದೆ, 1948, ಕರ್ನಾಟಕ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಕಾಯ್ದೆ, 1961, ತೋಟ ಕಾರ್ಮಿಕರ ಕಾಯ್ದೆ, 1951, ಬೀಡಿ ಮತ್ತು ಸಿಗಾರ್ ಕಾರ್ಮಿಕರ (ಉದ್ಯೋಗ ಮತ್ತು ಷರತ್ತುಗಳು) ಕಾಯ್ದೆ, 1966 ಹಾಗೂ ಮೋಟಾರು ಸಾರಿಗೆ ಕಾರ್ಮಿಕರ ಕಾಯ್ದೆ, 1961 ರಡಿ ನೋಂದಣಿಯಾಗಿರುವ ಎಲ್ಲಾ ಕೈಗಾರಿಕೆಗಳು ಹಾಗೂ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳಾ ನೌಕರರ ಕಾರ್ಯದಕ್ಷತೆ ಮತ್ತು ಕಾರ್ಯಕ್ಷಮತೆ ಹೆಚ್ಚಿಸಿ ಅವರ ಮನೋಸ್ಥೈರ್ಯವನ್ನು ಹೆಚ್ಚಿಸಲು ಮಾಸಿಕ ಋತುಚಕ್ರದ ಸಂದರ್ಭದಲ್ಲಿ ವೇತನ ಸಹಿತ ರಜೆಯನ್ನು ಮಂಜೂರು ಮಾಡಲು ಅಧಿಸೂಚನೆ ಹೊರಡಿಸುವ ಸಂಬಂಧ ಚರ್ಚಿಸಿ ವರದಿ ಸಲ್ಲಿಸಲು ಇಲಾಖೆಯ ವಿವಿಧ ಸ್ತರದ ಅಧಿಕಾರಿಗಳು, ತಜ್ಞವೈದ್ಯರು, ಕಾರ್ಮಿಕ ವರ್ಗಗಳ ಪ್ರತಿನಿಧಿಗಳು, ಕೈಗಾರಿಕಾ ಸಂಘದ ಪ್ರತಿನಿಧಿಗಳು, IT/ BT ಪ್ರತಿನಿಧಿ, ಗಾರ್ಮೆಂಟ್ಸ್ ಮಾಲೀಕರ ಪ್ರತಿನಿಧಿ, ಪ್ರಾಧ್ಯಾಪಕರು, ಸಮಾಜ ಸೇವಕರು, ಮಾಲೀಕ ವರ್ಗದ ಪ್ರತಿನಿಧಿಗಳು, ಇತರೆ ಸದಸ್ಯರುಗಳನ್ನೊಳಗೊಂಡ ತಜ್ಞರ ಸಮಿತಿಯನ್ನು ರಚಿಸಲಾಗಿತ್ತು.

ಸದರಿ ತಜ್ಞರ ಸಮಿತಿಯು ವಿವಿಧ ಹಂತಗಳಲ್ಲಿ ಚರ್ಚಿಸಿ ಕಾರ್ಖಾನೆಗಳು, ಪ್ಲಾಂಟೇಷನ್, ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳು ಮೊದಲಾದವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳೆಯರಿಗೆ ಅವರ ಋತುಚಕ್ರದ ಸಮಯದಲ್ಲಿ ವಾರ್ಷಿಕ 6 ಋತುಸ್ರಾವ ರಜೆಗಳನ್ನು ಬಳಸಿಕೊಳ್ಳಲು "ಋತುಚಕ್ರ ರಜಾನೀತಿ" ಯನ್ನು ಜಾರಿಗೊಳಿಸುವಂತೆ ಶಿಫಾರಸ್ಸು ಮಾಡಿದ್ದು, ಮಹಿಳಾ ನೌಕರರಿಗೆ ವೇತನ ಸಹಿತ ಋತುಸ್ರಾವದ ರಜೆ ನೀಡುವ ಕುರಿತು ಸಾರ್ವಜನಿಕ ಅಭಿಪ್ರಾಯ ಸಂಗ್ರಹಿಸಲು ಅನುಕೂಲವಾಗುವಂತೆ ಕಾರ್ಖಾನೆಗಳು, ಕೈಗಾರಿಕೆಗಳು ಮತ್ತು ಇತರೆ ಉದ್ದಿಮೆಗಳ ಮಾಲೀಕರು, ವಿವಿಧ ಸಂಘಟನೆಗಳು, ಮಹಿಳಾ ಸಂಘಟನೆಗಳು, ಕಾರ್ಮಿಕ

ಪ್ರತಿನಿಧಿಗಳು, ಕಾರ್ಮಿಕರು ಹಾಗೂ ಸಾರ್ವಜನಿಕರ ಗಮನಕ್ಕಾಗಿ ಹಾಗೂ ಸಲಹೆ, ಸೂಚನೆ, ಆಕ್ಷೇಪಣೆ/ ಅಭಿಪ್ರಾಯ ಕೋರಿ ಇಲಾಖೆಯ ವೆಬ್‌ಸೈಟ್ karmikaspandana.gov.in ಸೇರಿದಂತೆ ದಿನಾಂಕ: 18-10-2025 ರಂದು ಪ್ರಕಟಿಸಲಾಗಿರುತ್ತದೆ.

ಕಾರ್ಮಿಕರು, ಕಾರ್ಮಿಕ ಸಂಘಗಳು, ಮಾಲೀಕರು, ಮಾಲೀಕ ಸಂಘಗಳು, ಮಹಿಳಾ ಸಂಘಟನೆಗಳು, ಸಾರ್ವಜನಿಕರು, ಸರ್ಕಾರಿ ನೌಕರರ ಒಕ್ಕೂಟ ಮೊದಲಾದವರಿಂದ ಪ್ರಸ್ತಾಪಿತ ಋತುಚಕ್ರ ರಜಾನೀತಿಯ ಸಂಬಂಧ ಒಟ್ಟು 75 ಅಭಿಪ್ರಾಯಗಳು ಸ್ವೀಕೃತವಾಗಿದ್ದು, ಈ ಪೈಕಿ 56 ಅಭಿಪ್ರಾಯಗಳು ಪ್ರಸ್ತಾಪಿತ ಋತುಚಕ್ರ ರಜಾನೀತಿಯ ಪರವಾಗಿರುತ್ತವೆ. ಉಳಿದಂತೆ 19 ಅಭಿಪ್ರಾಯಗಳು ವಿರುದ್ಧವಾಗಿರುತ್ತವೆ. ಉದ್ದೇಶಿತ ರಜಾನೀತಿಯನ್ನು ಬೆಂಬಲಿಸಿ ಸ್ವೀಕೃತವಾದ 56 ಅಭಿಪ್ರಾಯಗಳಲ್ಲಿ, 26 ಅಭಿಪ್ರಾಯಗಳು ಮಾಲೀಕ ವರ್ಗದವರು, 7 ಕಾರ್ಮಿಕ ಸಂಘಗಳು, 19 ನೌಕರರು, 1 ಸಾರ್ವಜನಿಕರು, 1 ಸರ್ಕಾರಿ ನೌಕರರ ಒಕ್ಕೂಟ, 2 ಮಹಿಳಾ ಸಂಘಗಳು ನೀಡಿರುತ್ತಾರೆ. ಅಲ್ಲದೇ ಪ್ರಸ್ತಾಪಿತ ಋತುಚಕ್ರ ರಜಾನೀತಿಯನ್ನು ಬೆಂಬಲಿಸಿರುವ ಕಾರ್ಮಿಕ/ ಕಾರ್ಮಿಕ ಸಂಘಟನೆ/ ಮಹಿಳಾ ಸಂಘಟನೆ/ ಆಡಳಿತ ವರ್ಗದವರ 56 ಅಭಿಪ್ರಾಯಗಳಲ್ಲಿ 10 (10 ಅಭಿಪ್ರಾಯಗಳಲ್ಲಿ 4 ಆಡಳಿತ ವರ್ಗದ ಅಭಿಪ್ರಾಯಗಳು) ಅಭಿಪ್ರಾಯಗಳು ಪ್ರಸ್ತಾಪಿಸಿರುವ ವಾರ್ಷಿಕ 6 ರಜೆಗಳಿಗೆ ಬದಲಾಗಿ 12 ರಜೆಗಳನ್ನು ನೀಡುವಂತೆ ಕೋರಲಾಗಿರುತ್ತವೆ.

ಪ್ರಸ್ತಾಪಿತ ಋತುಚಕ್ರ ರಜಾನೀತಿಯ **ಪರವಾಗಿ** ಹೆಚ್ಚಿನ ಅಭಿಪ್ರಾಯಗಳು ಸ್ವೀಕೃತಗೊಂಡಿರುವುದರಿಂದ ಹಾಗೂ ಸದರಿ ರಜಾನೀತಿಯನ್ನು ರೂಪಿಸುವುದರಿಂದ ವಿವಿಧ ಉದ್ದಿಮೆಗಳಲ್ಲಿ ದುಡಿಯುವ ಮಹಿಳಾ ನೌಕರರ ಆರೋಗ್ಯ ಮತ್ತು ಯೋಗಕ್ಷೇಮ ಉತ್ತೇಜಿಸಲ್ಪಟ್ಟು, ಅವರ ಕಾರ್ಯದಕ್ಷತೆ ಮತ್ತು ಕಾರ್ಯಕ್ಷಮತೆ ಹೆಚ್ಚುತ್ತದೆ. ಇದರಿಂದಾಗಿ ಉತ್ಪಾದನಾ ಚಟುವಟಿಕೆಗಳಲ್ಲಿ ಮಹಿಳಾ ನೌಕರರ ಭಾಗವಹಿಸುವಿಕೆ ಹೆಚ್ಚಿ ದೇಶದ ಉತ್ಪಾದನೆ ಹೆಚ್ಚಲು ಕಾರಣವಾಗುತ್ತದೆ. ಇದರಿಂದ ಮಹಿಳಾ ಸಬಲೀಕರಣ ಸಾಧ್ಯವಾಗುತ್ತದೆ ಹಾಗೂ ಋತುಚಕ್ರದ ರಜಾನೀತಿಯನ್ನು ರೂಪಿಸುವುದರಿಂದ ಮಹಿಳಾ ದುಡಿಮೆಗೆ ಸಂಬಂಧಿಸಿದಂತೆ ಕರ್ನಾಟಕವು ಒಂದು ಜಾಗತಿಕ ಉತ್ತಮ ಅಭ್ಯಾಸವನ್ನು ಹೊಂದಿದಂತಾಗುತ್ತದೆ ಎಂದು ಮೇಲೆ ಕ್ರ.ಸಂ.(2) ರಲ್ಲಿ ಆಯುಕ್ತರು, ಕಾರ್ಮಿಕ ಇಲಾಖೆ, ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ.(3) ರ ಸಚಿವ ಸಂಪುಟ ಟಿಪ್ಪಣಿಯಲ್ಲಿ "ರಾಜ್ಯದಾದ್ಯಂತ ಸರ್ಕಾರಿ ಕಚೇರಿಗಳು, ಗಾರ್ಮೆಂಟ್ಸ್, MNC ಗಳು, IT ಮತ್ತು ಇತರ ಖಾಸಗಿ ಕೈಗಾರಿಕೆಗಳು ಸೇರಿದಂತೆ ಎಲ್ಲಾ ವಲಯಗಳಲ್ಲಿ ಕೆಲಸ ಮಾಡುವ ಮಹಿಳೆಯರಿಗೆ ಪ್ರತಿ ತಿಂಗಳು ಒಂದು ದಿನದ ವೇತನ ಸಹಿತ ರಜೆ ನೀಡುವ "ಋತುಚಕ್ರ ರಜೆ ನೀತಿ, 2025" ಅನ್ನು ಜಾರಿಗೆ ತರಲು" ಸಚಿವ ಸಂಪುಟವು ಅನುಮೋದಿಸಿರುತ್ತದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ. ಕಾಇ 466 ಎಲ್‌ಇಟಿ 2023,**
**ಬೆಂಗಳೂರು, ದಿನಾಂಕ:12/11/2025.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ ಕಾರ್ಖಾನೆಗಳ ಕಾಯ್ದೆ, 1948, ಕರ್ನಾಟಕ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಕಾಯ್ದೆ, 1961, ತೋಟ ಕಾರ್ಮಿಕರ ಕಾಯ್ದೆ, 1951, ಬೀಡಿ ಮತ್ತು ಸಿಗಾರ್ ಕಾರ್ಮಿಕರ (ಉದ್ಯೋಗ ಮತ್ತು ಷರತ್ತುಗಳು) ಕಾಯ್ದೆ, 1966 ಹಾಗೂ ಮೋಟಾರು ಸಾರಿಗೆ ಕಾರ್ಮಿಕರ ಕಾಯ್ದೆ, 1961ರಡಿ ನೋಂದಣಿಯಾಗಿರುವ ಎಲ್ಲಾ ಕೈಗಾರಿಕೆಗಳು ಹಾಗೂ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ 18 ರಿಂದ 52 ವರ್ಷದ ವಯೋಮಿತಿಯ ಎಲ್ಲಾ ಖಾಯಂ/ ಗುತ್ತಿಗೆ/ ಹೊರಗುತ್ತಿಗೆ ಮಹಿಳಾ ನೌಕರರಿಗೆ ಅವರ ಆರೋಗ್ಯ, ಕಾರ್ಯದಕ್ಷತೆ ಮತ್ತು ಕಾರ್ಯಕ್ಷಮತೆ ಹೆಚ್ಚಿಸಿ ಅವರ ಮನೋಸ್ಥೈರ್ಯವನ್ನು ಹೆಚ್ಚಿಸುವ ಸದುದ್ದೇಶದಿಂದ,

ಅವರ ಋತುಚಕ್ರದ ಸಮಯದಲ್ಲಿ ಪ್ರತಿ ಮಾಸಿಕ ಒಂದು ದಿನದ ರಜೆಯಂತೆ ವಾರ್ಷಿಕ 12 ದಿನಗಳ ವೇತನ ಸಹಿತ ರಜೆಯ ಸೌಲಭ್ಯವನ್ನು ಸಂಬಂಧಿಸಿದ ಉದ್ಯೋಗದಾತರು ಒದಗಿಸುವಂತೆ ಆದೇಶಿಸಿದೆ.

**ಷರತ್ತುಗಳು:**

1. ಮಹಿಳಾ ನೌಕರರು ಆಯಾ ತಿಂಗಳ "ಋತುಚಕ್ರ ರಜೆ" ಯನ್ನು ಆಯಾ ತಿಂಗಳಿನಲ್ಲಿಯೇ ಬಳಸಿಕೊಳ್ಳುವುದು. ಹಿಂದಿನ ತಿಂಗಳ "ಋತುಚಕ್ರ ರಜೆ" ಯನ್ನು ಮುಂದಿನ ತಿಂಗಳಿಗೆ ವಿಸ್ತರಿಸಲು (carry over) ಅವಕಾಶವಿರುವುದಿಲ್ಲ.

2. ಪ್ರತಿ ತಿಂಗಳು ಒಂದು ದಿನದ "ಋತುಚಕ್ರ ರಜೆ" ಪಡೆಯಲು ಮಹಿಳಾ ನೌಕರರು ಯಾವುದೇ ವೈದ್ಯಕೀಯ ಪ್ರಮಾಣ ಪತ್ರವನ್ನು ಒದಗಿಸುವ ಅವಶ್ಯಕತೆ ಇರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಸುಮ.ಎಸ್**
ಸರ್ಕಾರದ ಅಧೀನ ಕಾರ್ಯದರ್ಶಿ,
ಕಾರ್ಮಿಕ ಇಲಾಖೆ.

# PROCEEDINGS OF THE GOVERNMENT OF KARNATAKA

**Subject:** Regarding Sanctioning one day of paid leave per month during menstrual cycle to women employees working in Establishments registered under various Labour Acts in the State.

**Read:**
1. The State Government Notification No. LD 466 LET 2023, dated:12/01/2024.
2. Letter No. P&S/others-02/ CR-39/2022-23, dated: 21/02/2025 of the Commissioner, Department of Labour.
3. Cabinet Note No. 834/2025, dated 9/10/2025.

******

In the Notification read at (1) above, to enhance the efficiency and capacity of women employees, to improve their morale during their menstrual cycle, a Committee was formed, consisting of officers from different departmental levels, expert doctors, representatives from labour sectors, Industrial Associations, IT/BT representatives, Garment owners, Academicians, Social workers, Employer representatives and others to discuss and submit a report regarding the issue of notification providing paid leave to all the women employees working in all industries and establishments in the State which are registered under The Factories Act, 1948, The Karnataka Shops and Commercial Establishments Act, 1961, The Plantation Labour Act, 1951, The Beedi and Cigar Workers (Conditions of Employment) Act, 1966 and the Motor Transport Workers Act, 1961.

The said Expert Committee, after thorough discussion, recommended the implementation of a "Menstrual Leave Policy" in factories, plantations, shops and commercial establishments employing women, to grant six annual paid menstrual leaves. For broader public feedback on granting the said leave to women employees, it was published in the Department's website karmikaspandana.gov.in on 18-10-2025 inviting views and suggestions from factories, industries, institutions, various organizations, women's organizations, labour representatives, workers and the public.

75 opinions were received from workers, Labour unions, employers, employer associations, women's organizations, the public, and Government Employee’s Federation regarding the proposed Menstrual Leave policy. Out of these, 56 supported the policy, and 19 opposed it. Out of the 56 supporting opinions, 26 were from Employers, 7 from Labour Unions, 19 from Employees, 1 from the public, 1 from the Government Employee’s Federation, and 2 from women's organizations. In addition 10 among the said opinions have (including 4 from Administrative section) requested for increasing the annual leave entitlement from 6 to 12 days.

Since the majority of opinions favour the proposed policy and the policy would increase the health, welfare, efficiency and productivity of women employees in various establishments, which would in turn enhance women's participation in productive activities and raise national output, the Commissioner, Department of Labour sent a proposal as a best global practice for women workers in Karnataka read at (2) above.

In the Cabinet Note read at (3) above, the Cabinet has approved "To implement the Menstrual Leave Policy, 2025" sanctioning one day of paid leave per month for working women in all sectors including Government offices and various private industries such as Garments, MNCs, IT and other industries operating in the State”.

After detailed examination of the proposal, the following order is issued:

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



**Government Order No. LD 466 LET 2023,**
**Bengaluru, dated:20/11/2025**

In the above context described in the proposal, with the intention of enhancing health, efficiency, mental well being and performance of women employees between 18 to 52 years of age working in the establishments registered under The Factories Act, 1948, The Karnataka Shops and Commercial Establishments Act, 1961, The Plantation Labour Act, 1951, The Beedi and Cigar Workers (Conditions of Employment) Act, 1966, and The Motor Transport Workers Act, 1961, it is ordered to provide one day of paid leave per month to all permanent/ contract/ outsourced women during their menstrual cycle, restricting to 12 days per year.

**Conditions:**

1. Women employees shall utilize "Menstrual Leave" of respective month in the respective month itself. Menstrual leave of the previous month shall not to be allowed to extended (Carry over) to the next month.
2. Women employees are not required to provide any medical certificate to avail one day "Menstrual Leave" every month.

By order and in the name of the
Government of Karnataka,

**Suma.S**
Under Secretary to Government
Labour Department.

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH
Digitally signed by THAMMAIAH
DN: c=IN, o=Centre for e-Governance,
2.5.4.20=be54f34f4e31eae50203ca7fab5ceb3794f20a8460a2582ef28294d43b8f8b16, ou=department
of printing stationery and Publication,CID - 7048443, postalCode=560001, st=Karnataka,
serialNumber=4d9b284dcc53d39f1425f50485de07dd86efa302a3fce3729eddea0c1b5098e0,
cn=THAMMAIAH
Date: 2025.11.20 18:03:53 +05'30'